1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,

ನಂಜನಗೂಡು

**ಸಿ.ಸಿ./01/2026**

ಪಿರ್ಯಾದಿ : ಬಿಳಿಗೆರೆ ಪೊಲೀಸರು

ವಿರುದ್ಧ

ಆರೋಪಿ : ಮಹದೇವಸ್ವಾಮಿ , **ಬಿನ್ ಲೇಟ್** ಮಹದೇವಯ್ಯ 34 ವರ್ಷ,

ವಾಸಃಮುಳ್ಳೂರು ಗ್ರಾಮ, ನಂಜನಗೂಡು ತಾಲ್ಲೂಕು

ಆಪಾದನೆ

ಶ್ರೀಮತಿ.ಸರಿತ ಕುಮಾರಿ ಎ ಎಂ., ಬಿ.ಎ., ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ ಃ-

ದಿನಾಂಕಃ02.01.2026 ರಂದು ಬೆಳಗ್ಗೆ 11.00 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಬಿಳಿಗೆರೆ ಗ್ರಾಮದಲ್ಲಿ ಬಸ್ಸು ನಿಲ್ದಾಣದ ಸಾರ್ವಜನಿಕ ರಸ್ತೆಯಲ್ಲಿ ಆರೋಪಿತರಾದ ನೀವು ಉದ್ದೇಶ ಪೂರ್ವಕವಾಗಿ ರಸ್ತೆ/ ಸ್ಥಳದಲ್ಲಿ ಸಾರ್ವಜನಿಕ ಶಾಂತಿಗೆ ಭಂಗ ಉಂಟಾಗುವಂತೆ ಅವಾಚ್ಯ ಶಬ್ದಗಳಿಂದ ಬೈದಾಡಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಕರ್ನಾಟಕ ಪೊಲೀಸ್ ಕಾಯ್ದೆ, 1963 ರ ಕಲಂ 92(o)&(r) ರೀತ್ಯಾ ದಂಡನೀಯವಾದ ಅಪರಾಧವನ್ನು ಎಸಗಿರುತ್ತೀರಿ ಎಂದು ನಿಮ್ಮ ಮೇಲೆ ಅಪಾದಿಸಲಾಗಿದೆ.

ಪ್ರಶ್ನೆ 1: ಮೇಲ್ಕಂಡ ಆಪಾದನೆಯನ್ನು ಓದಿ ಹೇಳಿದ್ದು ಅರ್ಥವಾಯಿತೇ?

ಉತ್ತರ :

ಪ್ರಶ್ನೆ 2: ಸದರಿ ಆಪಾದನೆಯನ್ನು ನೀವು ಒಪ್ಪಿಕೊಳ್ಳುವಿರೋ ? ಅಥವಾ ವಿಚಾರಣೆಯಾಗಬೇಕೆಂದು ಬಯಸುವಿರೋ ?

ಉತ್ತರ :

ಮೇಲ್ಕಂಡ ಆಪಾದನೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ಓದಿ ಹೇಳಿ ಅವರು ನೀಡಿದ ಉತ್ತರವನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತು ಎಂದು ದೃಢೀಕರಿಸುತ್ತೇನೆ.

ದಿನಾಂಕಃ05.01.2026

1 ನೇ ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.
ನಂಜನಗೂಡು